# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 852 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14.07.2023 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಾನವೀಯತೆ, ಸಮಾನತೆಯ ಹರಿಕಾರ ಶ್ರೀ ನಾರಾಯಣಗುರುರವರ ಸ್ಮರಣಾರ್ಥ ಉಡುಪಿ ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದು ಶ್ರೀ ನಾರಾಯಣಗುರು ವಸತಿ ಶಾಲೆಗಳನ್ನು ಪ್ರಾರಂಭಿಸುವ ಯೋಜನೆಯು ಸರ್ಕಾರದ ಮುಂದಿದೆಯೇ; ಹೌದಾದಲ್ಲಿ ಉದ್ದೇಶಿತ ಈ ಜಿಲ್ಲೆಗಳಲ್ಲಿ ಯೋಜನೆಯು ಯಾವ ಹಂತದಲ್ಲಿದೆ ಮತ್ತು ಇದಕ್ಕಾಗಿ ಮೀಸಲಿಟ್ಟಿರುವ ಅನುದಾನ, ಇದುವರೆಗೂ ಖರ್ಚು ಮಾಡಿರುವ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | **ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ**<br>ಮಾನವೀಯತೆ, ಸಮಾನತೆ ಹರಿಕಾರ ಶ್ರೀ ನಾರಾಯಣಗುರು ರವರ ಸ್ಮರಣಾರ್ಥ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಶ್ರೀ ನಾರಾಯಣಗುರು ವಸತಿ ಶಾಲೆಗಳನ್ನು 2022-23ನೇ ಸಾಲಿಗೆ ಶೈಕ್ಷಣಿಕ ವರ್ಷದಲ್ಲಿ ಪ್ರಾರಂಭಿಸಿ ನಡೆಸಲಾಗುತ್ತಿದೆ.<br>ಸದರಿ ವಸತಿ ಶಾಲೆಗಳಿಗೆ ಕಟ್ಟಡ ನಿರ್ಮಾಣ ಮಾಡಲು ತಲಾ ಒಂದು ವಸತಿ ಶಾಲೆಗೆ ರೂ.18 ಕೋಟಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿದ್ದು, ಪ್ರಸ್ತುತ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಕಾರ್ಯಾದೇಶ ನೀಡುವ ಹಂತದಲ್ಲಿದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಆ) | ಹಿಂದುಳಿದ ವರ್ಗಗಳ ಸುಮಾರು 25000 ಯುವ ಜನರಿಗೆ ಕೌಶಲ್ಯ ಅಭಿವೃದ್ಧಿಪಡಿಸಿ ಉದ್ಯೋಗಮುಖಿಗಳನ್ನಾಗಿಸಲು ಐಟಿಐ, ಜಿಟಿಟಿಸಿ, ಕೆಜಿಟಿಟಿಐ ಸಂಸ್ಥೆಗಳಲ್ಲಿ ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ ನೀಡಲು 'ಅಮೃತ ಮುನ್ನಡೆ' ಎಂಬ ಹೊಸ ಯೋಜನೆಯನ್ನು ಆರಂಭಿಸಲಾಗಿದೆಯೇ ಆರಂಭಿಸಿದ್ದಲ್ಲಿ, ಇದುವರೆಗೂ ಎಷ್ಟು ಯುವಜನರು ಈ ಯೋಜನೆಯನ್ನು ಸದುಪಯೋಗಪಡಿಸಿಕೊಂಡು ಉದ್ಯೋಗಮುಖಿಗಳಾಗಿದ್ದಾರೆ. | **ಡಿ. ದೇವರಾಜ ಅರಸು, ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ**<br>ಹಿಂದುಳಿದ ವರ್ಗಗಳ ಸುಮಾರು 25000 ಯುವ ಜನರಿಗೆ ಕೌಶಲ್ಯ ಅಭಿವೃದ್ಧಿಪಡಿಸಿ ಉದ್ಯೋಗ ಮುಖಿಗಳನ್ನಾಗಿಸಲು ಐಟಿಐ, ಜಿಟಿಟಿಸಿ, ಕೆಜಿಟಿಟಿಐ ಹಾಗೂ ಎಟಿಡಿಸಿ ಸಂಸ್ಥೆಗಳಲ್ಲಿ ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ ನೀಡಲು 2022-23ನೇ ಸಾಲಿನಲ್ಲಿ 'ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ' ಎಂಬ ಹೊಸ ಯೋಜನೆಯನ್ನು ಆರಂಭಿಸಲಾಗಿದೆ. ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಇದುವರೆವಿಗೂ 1227 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುತ್ತಿದೆ. ತರಬೇತಿ ಪೂರ್ಣಗೊಂಡ ನಂತರ ತರಬೇತಿ ಪಡೆದ ಅಭ್ಯರ್ಥಿಗಳು ಉದ್ಯೋಗಮುಖಿಗಳಾಗುತ್ತಾರೆ. |

| | | |
|---|---|---|
| | | **ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ**<br>ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮತಕ್ಕೆ ಸಂಬಂಧಿಸಿದಂತೆ ನಿಗಮದ ಪ್ರವರ್ಗದಡಿ ಬರುವ ಸಮುದಾಯದನವರಿಗೆ 2022-23ನೇ ಸಾಲಿನಿಂದ ಕೌಶಲ್ಯ ತರಬೇತಿ ನೀಡಲು ಅಮೃತ ಮುನ್ನಡೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, ಈ ಯೋಜನೆಯಿಂದ 32 ವಿದ್ಯಾರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗುತ್ತಿದೆ.<br>**ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ**<br>ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ 2022-23ನೇ ಸಾಲಿನಲ್ಲಿ ಐಟಿಐ, ಜಿಟಿಟಿಸಿ, ಕೆಜಿಟಿಟಿಐ ಸಂಸ್ಥೆಗಳಲ್ಲಿ ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ ನೀಡಲು 'ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ' ಎಂಬ ಹೊಸ ಯೋಜನೆಯನ್ನು ಆರಂಭಿಸಲಾಗಿರುತ್ತದೆ.<br>ಪ್ರಸ್ತುತ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ ಜಿಟಿಟಿಸಿ ಸಂಸ್ಥೆಯಲ್ಲಿ 29 ಅಭ್ಯರ್ಥಿಗಳಿಗೆ ತರಬೇತಿ ಕಾರ್ಯಕ್ರಮ ನೀಡಲಾಗುತ್ತಿದೆ.<br>**ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ**<br>ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 'ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ' ಯೋಜನೆಯನ್ನು 2022-23 ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗಿದ್ದು, 200 ಫಲಾನುಭವಿಗಳಿಗೆ ತರಬೇತಿ ನೀಡಲು ಗುರಿ ನಿಗಧಿಪಡಿಸಿದ್ದು, ಐ.ಟಿ.ಐ, ಜಿ.ಟಿ.ಟಿ.ಸಿ., ಕೆ.ಜಿ.ಟಿ.ಟಿ.ಐ ಸಂಸ್ಥೆಗಳಿಂದ ತರಬೇತಿ ಪ್ರಗತಿ ಹಂತದಲ್ಲಿದೆ.<br>**ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ**<br>2022-23ನೇ ಸಾಲಿನಲ್ಲಿ ಸರ್ಕಾರದಿಂದ 'ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ' ಎಂಬ ಹೊಸ ಯೋಜನೆಯನ್ನು ಪ್ರಾರಂಭಿಸಿದ್ದು, ಈ ಯೋಜನೆಯ ಮುಖೇನ KGTT, ITI & GTTC ಸಂಸ್ಥೆಗಳಿಂದ ಉಚಿತವಾಗಿ ಕೌಶಲ್ಯ ತರಬೇತಿ ನೀಡಲಾಗುತ್ತಿದೆ. ನಿಗಮದಿಂದ 1513 ವಿದ್ಯಾರ್ಥಿಗಳನ್ನು ಆಯ್ಕೆಮಾಡಿದ್ದು ಕ್ರಿಯಾ ಯೋಜನೆಯಲ್ಲಿ ಸದರಿ ಕಾರ್ಯಕ್ರಮಕ್ಕೆ ರೂ. 4.00 ಕೋಟಿ ಅನುದಾನ ನಿಗಧಿಪಡಿಸಲಾಗಿದೆ. ತರಬೇತಿ ಪ್ರಕ್ರಿಯೆ ಜಾರಿಯಲ್ಲಿದೆ. |

**ಕರ್ನಾಟಕ ಒಕ್ಕಲಿಗರ ಅಭಿವೃದ್ಧಿ ನಿಗಮ**

ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದಿಂದ 'ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ' ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡಲು 2022-23ನೇ ಸಾಲಿನಲ್ಲಿ ಪ್ರಾರಂಭಿಸಲಾಗಿದೆ. ಇದುವರೆಗೆ 378 ಯುವಜನರಿಗೆ ತರಬೇತಿ ನೀಡಿ, ಉದ್ಯೋಗಮುಖಿಗಳನ್ನಾಗಿ ಮಾಡಲಾಗಿರುತ್ತದೆ.

**ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ**

2022-23ನೇ ಸಾಲಿನಿಂದ ಮರಾಠ ಸಮುದಾಯದ ಯುವಜನರಿಗೆ ಉದ್ಯೋಗಮುಖಿಗಳನ್ನಾಗಿಸಲು ಐಟಿಐ, ಜಿಟಿಟಿಸಿ, ಕೆಜಿಟಿಟಿಐ ಸಂಸ್ಥೆಗಳಲ್ಲಿ ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ ನೀಡಲು 'ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ' ಎಂಬ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಪ್ರಸಕ್ತ ಸಾಲಿನಲ್ಲಿ 392 ಯುವಕರು ಅರ್ಜಿ ಸಲ್ಲಿಸಿದ್ದು, ತರಬೇತಿ ಕಾರ್ಯವು ಪ್ರಗತಿ ಹಂತದಲ್ಲಿರುತ್ತದೆ.

**ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ, ಸವಿತಾ ಸಮಾಜ ಅಭಿವೃದ್ಧಿ ನಿಗಮ, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ.**

ಹಿಂದುಳಿದ ವರ್ಗಗಳ ಸುಮಾರು 25000 ಯುವ ಜನರಿಗೆ ಕೌಶಲ್ಯ ಅಭಿವೃದ್ಧಿ ಪಡಿಸಿ ಉದ್ಯೋಗಮುಖಿಗಳನ್ನಾಗಿಸಲು ಐಟಿಐ, ಜಿಟಿಟಿಸಿ, ಕೆಜಿಟಿಟಿಐ ಹಾಗೂ ಎಟಿಡಿಸಿ ಸಂಸ್ಥೆಗಳಲ್ಲಿ ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ ನೀಡಲು 2022-23ನೇ ಸಾಲಿನಲ್ಲಿ 'ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ' ಎಂಬ ಹೊಸ ಯೋಜನೆಯನ್ನು ಆರಂಭಿಸಲಾಗಿದೆ. ಇದುವರೆವಿಗೂ ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ 104 ಅಭ್ಯರ್ಥಿಗಳಿಗೆ, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ 94 ಅಭ್ಯರ್ಥಿಗಳಿಗೆ ಮತ್ತು ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ 96 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುತ್ತಿದೆ. ತರಬೇತಿ ಪೂರ್ಣಗೊಂಡ ನಂತರ ತರಬೇತಿ ಪಡೆದ ಅಭ್ಯರ್ಥಿಗಳು ಉದ್ಯೋಗಮುಖಿಗಳಾಗುತ್ತಾರೆ

| | | |
|---|---|---|
| ಇ) | ಈ ಯೋಜನೆಯ ಅನುಷ್ಠಾನಕ್ಕಾಗಿ ಮೀಸಲಿಟ್ಟಿರುವ ಅನುದಾನವನ್ನು ಮತ್ತು ಇದುವರೆಗೂ ಖರ್ಚುಮಾಡಿರುವ ಅನುದಾನವೆಷ್ಟು? (ಮಾಹಿತಿನೀಡುವುದು) | **ಡಿ. ದೇವರಾಜ ಅರಸು, ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ**<br>ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 'ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ'ಯ ಅನುಷ್ಠಾನಕ್ಕಾಗಿ ರೂ.10.00 ಕೋಟಿಗಳ ಅನುದಾನವನ್ನು ಮೀಸಲಿಡಲಾಗಿದೆ. ಇದುವರೆವಿಗೂ 1227 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುತ್ತಿದೆ. ತರಬೇತಿ ಪೂರ್ಣಗೊಂಡ ನಂತರ ತರಬೇತಿ ವೆಚ್ಚ ಪಾವತಿಸಲಾಗುವುದು.<br>**ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ**<br>2022-23ನೇ ಸಾಲಿನಲ್ಲಿ ನಿಗಮದಿಂದ ರೂ.100.00 ಲಕ್ಷಗಳನ್ನು ಮೀಸಲಿಟ್ಟಿದ್ದು, ಕೌಶಲ್ಯಾಭಿವೃದ್ಧಿ ತರಬೇತಿ ಸಂಸ್ಥೆಯಿಂದ ತರಬೇತಿ ನೀಡಿರುವ ಬಗ್ಗೆ ಬಿಲ್ಲು ಒದಗಿಸಿದ ಕೂಡಲೆ 32 ವಿದ್ಯಾರ್ಥಿಗಳ ತರಬೇತಿಗೆ ತಗಲುವ ವೆಚ್ಚವನ್ನು ಪಾವತಿಸಲು ಕ್ರಮವಹಿಸಲಾಗುವುದು.<br>**ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ**<br>2022-23ನೇ ಸಾಲಿನಲ್ಲಿ ಮೇಲಿನ ಯೋಜನೆಗಾಗಿ ರೂ.35.00 ಲಕ್ಷಗಳ ಅನುದಾನವನ್ನು ಮೀಸಲಿಡಲಾಗಿದೆ. ತರಬೇತಿ ಕಾರ್ಯಕ್ರಮಗಳು ಮುಕ್ತಾಯಗೊಂಡ ನಂತರ ದಾಖಲಾತಿಗಳನ್ನು ಪಡೆದು ಪಾವತಿಮಾಡಲಾಗುವುದು.<br>**ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ**<br>ಸದರಿ ಯೋಜನೆಯಡಿ ಮೀಸಲಿಟ್ಟಿರುವ ಅನುದಾನ ರೂ. 1.00 ಕೋಟಿಯಾಗಿದ್ದು, 200 ಫಲಾನುಭವಿಗಳಿಗೆ ತಲಾ ರೂ.15,000/-ಗಳಂತೆ ರೂ.30.00 ಲಕ್ಷಗಳ ಅನುದಾನವನ್ನು ಕೆ.ಎಸ್.ಡಿ.ಸಿ.ರವರಿಗೆ ತರಬೇತಿಗಾಗಿ ಬಿಡುಗಡೆ ಮಾಡಲಾಗಿದೆ.<br>**ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ**<br>'ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ'ಗೆ ರೂ. 4.00 ಕೋಟಿ ಅನುದಾನ ನಿಗಧಿಪಡಿಸಲಾಗಿದ್ದು, ತರಬೇತಿ ಪ್ರಕ್ರಿಯೆ ಜಾರಿಯಲ್ಲಿದೆ. ಆದ್ದರಿಂದ ಅನುದಾನ ಖರ್ಚು ಮಾಡಿರುವುದಿಲ್ಲ.<br>**ಕರ್ನಾಟಕ ಒಕ್ಕಲಿಗರ ಅಭಿವೃದ್ಧಿ ನಿಗಮ**<br>ಈ ಯೋಜನೆಯ ಅನುಷ್ಠಾನಕ್ಕೆ ರೂ.750.00 ಲಕ್ಷ ನಿಗದಿಪಡಿಸಿದ್ದು, ಇದುವರೆಗೂ ವೆಚ್ಚ ಮಾಡಿರುವುದಿಲ್ಲ. ತರಬೇತಿ ಪಡೆದ 378 ಅಭ್ಯರ್ಥಿಗಳ ತರಬೇತಿ ವೆಚ್ಚವನ್ನು ಪಾವತಿಸುವ ಕಾರ್ಯ ಪ್ರಗತಿಯಲ್ಲಿದೆ. |

**ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ**

ಸದರಿ ಯೋಜನೆಗೆ 2022-23ನೇ ಸಾಲಿನಲ್ಲಿ ರೂ.58.80 ಲಕ್ಷಗಳನ್ನು ಮೀಸಲಿಡಲಾಗಿದ್ದು, ಇದುವರೆಗೂ ರೂ.11.40 ಲಕ್ಷಗಳನ್ನು ಖರ್ಚು ಮಾಡಲಾಗಿರುತ್ತದೆ. ಪ್ರಸ್ತುತ ತರಬೇತಿ ಕಾರ್ಯವು ಪ್ರಗತಿ ಹಂತದಲ್ಲಿರುತ್ತದೆ.

**ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ, ಸವಿತಾ ಸಮಾಜ ಅಭಿವೃದ್ಧಿ ನಿಗಮ, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ.**

(ರೂ.ಲಕ್ಷಗಳಲ್ಲಿ)

| ಕ್ರ ಸಂ | ನಿಗಮದ ಹೆಸರು | ಮೀಸಲಿಟ್ಟಿರುವ ಅನುದಾನ |
|---|---|---|
| 1 | ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ | 50.00 |
| 2 | ಸವಿತಾ ಸಮಾಜ ಅಭಿವೃದ್ಧಿ ನಿಗಮ | 50.00 |
| 3 | ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ | 20.00 |

ಇದುವರೆವಿಗೂ ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ 104 ಅಭ್ಯರ್ಥಿಗಳಿಗೆ, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ 94 ಅಭ್ಯರ್ಥಿಗಳಿಗೆ ಮತ್ತು ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ 96 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುತ್ತಿದ್ದು. ತರಬೇತಿ ಪೂರ್ಣಗೊಂಡ ನಂತರ ತರಬೇತಿ ವೆಚ್ಚ ಪಾವತಿಸಲಾಗುವುದು.

**ಸಂಖ್ಯೆ:ಹಿಂವಕ 335 ಬಿಂಎಂಎಸ್ 2023**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.

<u>ಅನುಬಂಧ-01</u>

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) ಪ್ರಶ್ನೆ ಸಂಖ್ಯೆ:852 ಕ್ಕೆ

| ಕ್ರ ಸಂ | ಜಿಲ್ಲೆ | ತಾಲ್ಲೂಕು | ವಿಧಾನ ಸಭಾ ಕ್ಷೇತ್ರ | ಸ್ಥಳ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) | ನಿವೇಶನದ ವಿವರ | ಭೌತಿಕ ಪ್ರಗತಿ |
|---|---|---|---|---|---|---|---|
| 1 | ದಕ್ಷಿಣ ಕನ್ನಡ | ಬಂಟ್ವಾಳ | ಬಂಟ್ವಾಳ | ನಾರಾಯಣ ಗುರು ವಸತಿ ಶಾಲೆ. ಪುಂಜಾಲು ಕಟ್ಟೆ | 1800 | ಪಿಲಾತಬೆಟ್ಟು ಗ್ರಾಮದ ಹಾಡಿ ಸ.ನಂ.202/ಪಿ1 ರಲ್ಲಿ 5-00 ಎಕರೆ | ಟೆಂಡರ್ ಪ್ರಕಿಯೆ ಪೂರ್ಣಗೊಂಡಿದ್ದು, ಕಾರ್ಯಾದೇಶ ನೀಡಬೇಕಾಗಿದೆ. |
| 2 | ಉಡುಪಿ | ಕುಂದಾಪುರ | ಕುಂದಾಪುರ | ನಾರಾಯಣ ಗುರು ವಸತಿ ಶಾಲೆ. ಬೇಳೂರು | 1800 | ವಡ್ಡರಸೆ ಗ್ರಾಮದಸ.ನಂ.116 & 117 ರಲ್ಲಿ | ಟೆಂಡರ್ ಪ್ರಕಿಯೆ ಪೂರ್ಣಗೊಂಡಿದ್ದು, ಕಾರ್ಯಾದೇಶ ನೀಡಬೇಕಾಗಿದೆ. |
| 3 | ಉತ್ತರ ಕನ್ನಡ | ಭಟ್ಕಳ | ಭಟ್ಕಳ | ನಾರಾಯಣ ಗುರು ವಸತಿ ಶಾಲೆ. ಜಾಲಿ | 1800 | ಜಾಲಿ ಗ್ರಾಮದ ಹಾಡಿ ಸ.ನಂ.232 ರಲ್ಲಿ 07-00 ಎಕರೆ | ಟೆಂಡರ್ ಪ್ರಕಿಯೆ ಪೂರ್ಣಗೊಂಡಿದ್ದು, ಕಾರ್ಯಾದೇಶ ನೀಡಬೇಕಾಗಿದೆ. |
| 4 | ಶಿವಮೊಗ್ಗ | ಸೊರಬ | ಸೊರಬ | ನಾರಾಯಣ ಗುರು ವಸತಿ ಶಾಲೆ. ಹಿರೇಶಕುನ | 1800 | ಸೊರಬ ತಾಲ್ಲೂಕು ಕಸಬಾ ಹೋಬಳಿ ಹಿರೇಶಕುನ ಗ್ರಾಮದ ಸ.ನಂ.113 ರಲ್ಲಿ 20.00 ಎಕರೆ | ಟೆಂಡರ್ ಪ್ರಕಿಯೆ ಪೂರ್ಣಗೊಂಡಿದ್ದು, ಕಾರ್ಯಾದೇಶ ನೀಡಬೇಕಾಗಿದೆ. |

ಕಾರ್ಯನಿರ್ವಾಹಕ ನಿರ್ದೇಶಕರು